# Akashvani : Bangalore
# Regional Bulletin In Kannada
# 03.02.2026 / 18.40 hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 03.02.2026 / 18.40 hrs

***************

ಮುಖ್ಯಾಂಶಗಳು

1. **ವಿಧಾನಸಭೆಯಲ್ಲಿ ವಿಕಸಿತ ಭಾರತ ಜಿ ರಾಮ್ ಜಿ ಕಾಯ್ದೆಯ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಣಯ ಮಂಡನೆ; ಪ್ರತಿಪಕ್ಷಗಳಿಂದ ಆಕ್ಷೇಪ**
2. **ಪ್ರಧಾನಿ ವಿರುದ್ಧ ಹೇಳಿಕೆ; ಮೇಲ್ಮನೆಯಲ್ಲಿ ನಸೀರ್ ಅಹಮ್ಮದ್ ವಿಷಾದ; ಸಿ.ಟಿ.ರವಿ ಕ್ಷಮೆಯಾಚಿಸುವಂತೆ ಆಡಳಿತ ಪಕ್ಷ ಆಗ್ರಹ– ಕಲಾಪ ನಾಳೆಗೆ ಮುಂದೂಡಿಕೆ**
3. **ಬೆಂಗಳೂರಿನ ಇಬ್ಲೂರು ಬಳಿ ಹೆಚ್ಚುವರಿ ಮೇಲ್ಸೇತುವೆ ನಿರ್ಮಾಣಕ್ಕೆ ನೀಲ ನಕ್ಷೆ ಸಿದ್ಧಪಡಿಸಲು ಜಿಬಿಎ ಆಯುಕ್ತ ಮಹೇಶ್ವರ್ ರಾವ್ ಸೂಚನೆ**
4. **ಹುಬ್ಬಳ್ಳಿಯಲ್ಲಿ ಇದೇ 6 ರಿಂದ 8 ರವರೆಗೆ 14ನೇ ಒಣಮೆಣಸಿನಕಾಯಿ ಮೇಳ; ಹೊಸ ಸಂಶೋಧನೆ ಬಗ್ಗೆ ವಿಜ್ಞಾನಿಗಳಿಂದ ಮಾಹಿತಿ**
5. **ದಾವಣಗೆರೆಯಲ್ಲಿ ಮೂರನೇ ವಿಶ್ವಕನ್ನಡ ಸಮ್ಮೇಳನ ನಡೆಸುವಂತೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರ ನಿರ್ಧಾರ**

***************

ವಿಧಾನಸಭೆಯಲ್ಲಿಂದು **ವಿಕಸಿತ ಭಾರತ ಜಿ ರಾಮ್ ಜಿ** ಕಾಯ್ದೆಯ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಣಯ ಮಂಡಿಸಿದ್ದಾರೆ. ಪ್ರತಿಪಕ್ಷಗಳ ಗದ್ದಲ, ಘೋಷಣೆಗಳ ನಡುವೆಯೇ ನಿರ್ಣಯ ಮಂಡಿಸಿ ಮಾತನಾಡಿದ ಅವರು, ಜಿ ರಾಮ್ ಜಿ ಕಾಯ್ದೆ, ಮನ್ರೇಗಾ ಕಾಯ್ದೆಯ ಮೂಲಸ್ವರೂಪದಲ್ಲಿ ಜಾರಿಯಾಗಬೇಕು ಎಂದು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಮನ್ರೇಗಾ ಕಾಯ್ದೆಯನ್ನು ರದ್ದುಗೊಳಿಸಿರುವುದನ್ನು ಈ ಸದನವು ಅತ್ಯಂತ ಗಂಭೀರವಾಗಿ ಪರಿಗಣಿಸುತ್ತದೆ. **'ವಿಕಸಿತ ಭಾರತ ಜಿ ರಾಮ್ ಜಿ'** ಕಾಯ್ದೆಯು ಒಕ್ಕೂಟ ವ್ಯವಸ್ಥೆಯ ಮೂಲ ಆಶಯಗಳಿಗೆ ಮತ್ತು ಗ್ರಾಮೀಣ ಜನರ ಜೀವನೋಪಾಯದ ಹಕ್ಕಿಗೆ ಮಾರಕವಾಗಿದೆ ಎಂದು ತಿಳಿಸಿದ್ದಾರೆ.

ಈ ಕಾಯ್ದೆಯು ವರ್ಷಕ್ಕೆ 12 ತಿಂಗಳ ಬದಲು ಕೇವಲ ಹತ್ತು ತಿಂಗಳು ಮಾತ್ರ ಕೆಲಸಕ್ಕೆ ಅವಕಾಶ ನೀಡುತ್ತದೆ. ತಕ್ಷಣವೇ **ವಿ ಬಿ ಗ್ರಾಮ್ ಜಿ** ಕಾಯ್ದೆಯನ್ನು ಕೇಂದ್ರ ಸರ್ಕಾರ ರದ್ದುಗೊಳಿಸುವಂತೆ ಆಗ್ರಹಿಸಿದ್ದಾರೆ.

ಭೋಜನ ವಿರಾಮದ ನಂತರ ಸದನ ಆರಂಭವಾಗುತ್ತಿದ್ದಂತೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತಿಗೆ ಬಿಜೆಪಿ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿ, ಸರ್ವಾನುಮತದ ನಿರ್ಣಯ ಎಂಬುದನ್ನು ತೆಗೆಯಬೇಕು. ಸರ್ಕಾರದ ನಿರ್ಣಯ ಎಂದು ಉಲ್ಲೇಖಿಸಬೇಕು ಎಂದು ಸಲಹೆ ನೀಡಿದರು.

ಸಭಾಧ್ಯಕ್ಷ ಯು.ಟಿ.ಖಾದರ್ ಮಾತನಾಡಿ, ಸರ್ಕಾರ ಮಂಡಿಸಿದ ನಿರ್ಣಯ ಕ್ರಮಬದ್ದವಾಗಿದೆ ಮುಖ್ಯಮಂತ್ರಿಗಳು ಚರ್ಚೆ ಮುಂದುವರಿಸಬಹುದು ಎಂದು ತಿಳಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಚರ್ಚೆಯಲ್ಲಿ ಭಾಗವಹಿಸಿ ಮಾತನಾಡುವಾಗ ಪ್ರತಿಪಕ್ಷ ಮತ್ತು ಆಡಳಿತ ಪಕ್ಷದ ಸದಸ್ಯರು ಪರಸ್ಪರ ಘೋಷಣೆ ಕೂಗಿದರು. ಈ ವೇಳೆ, ಸದನದಲ್ಲಿ ಕೋಲಾಹಲ ನಿರ್ಮಾಣವಾಯಿತು. ಪ್ರತಿಪಕ್ಷಗಳ ಸದಸ್ಯರ ಘೋಷಣೆ ನಿಯಂತ್ರಣಕ್ಕೆ ಬಾರದ ಹಿನ್ನಲೆಯಲ್ಲಿ ಸಭಾಧ್ಯಕ್ಷ ಯು.ಟಿ.ಖಾದರ್ ಸದನವನ್ನು ಕೆಲಕಾಲ ಮುಂದೂಡಿದರು.

***************

ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಆಕ್ಷೇಪಾರ್ಹ ಹೇಳಿಕೆ ಖಂಡಿಸಿ ಕಾಂಗ್ರೆಸ್ ಸದಸ್ಯ ನಸೀರ್ ಅಹ್ಮದ್ ಅವರನ್ನು ತಕ್ಷಣವೇ ಸದನದಿಂದ ಅಮಾನತುಗೊಳಿಸಬೇಕೆಂದು ಒತ್ತಾಯಿಸಿ ವಿಧಾನ ಪರಿಷತ್ತಿನಲ್ಲಿ ಇಂದು ವಿಪಕ್ಷ ಬಿಜೆಪಿ ಧರಣಿ ನಡೆಸಿತು.

ನಸೀರ್ ಅಹ್ಮದ್ ಮಾತನಾಡಿ, ಪ್ರಧಾನಿ ಮೋದಿಯವರು ಇಲ್ಲ ಎಂದರೆ ದೇಶ ಇಲ್ಲ ಎಂದು ಬಿಜೆಪಿ ಸದಸ್ಯರು ಹೇಳಿದ್ದರು. ಹೀಗಾಗಿ ನಾನು ಈ ರೀತಿಯ ಪ್ರತಿಕ್ರಿಯೆ ನೀಡಿದ್ದಾಗಿ ಸ್ಪಷ್ಟನೆ ನೀಡಿ, ತಾವು ಆಡಿದ ಮಾತಿಗೆ ವಿಷಾದ ವ್ಯಕ್ತಪಡಿಸಿದರು.

ಈ ನಡುವೆ, ಸಿ.ಟಿ.ರವಿ ನಸೀರ್ ಅಹಮ್ಮದ್ ವಿರುದ್ಧ ನೀಡಿದ್ದ ಹೇಳಿಕೆ ಖಂಡಿಸಿ, ಆಡಳಿತ ಪಕ್ಷದ ಸದಸ್ಯರು ಕ್ಷಮೆಯಾಚಿಸುವಂತೆ ಪಟ್ಟುಹಿಡಿದರು. ಇದು ಆಡಳಿತ ಹಾಗೂ ಪ್ರತಿಪಕ್ಷಗಳ ನಡುವೆ ತೀವ್ರ ಮಾತಿನ ಚಕಮಕಿಗೆ ಕಾರಣವಾಗಿ, ಸದನ ಗೊಂದಲದ ಗೂಡಾಯಿತು. ಈ ವೇಳೆ, ಸಭಾಪತಿ ಸ್ಥಾನದಲ್ಲಿದ್ದ ಪ್ರಾಣೇಶ್ ಸದನದ ಕಲಾಪವನ್ನು ನಾಳೆಗೆ ಮುಂದೂಡಿದರು.

***************

ಬೆಂಗಳೂರಿನ ಹೊರ ವರ್ತುಲ ರಸ್ತೆಯ ಇಬ್ಲೂರು ಬಳಿ ಹೆಚ್ಚುವರಿ ಮೇಲ್ಸೇತುವೆ ನಿರ್ಮಾಣಕ್ಕೆ ಸಂಬಂಧಿಸಿದಂತೆ ನೀಲ ನಕ್ಷೆ ಸಿದ್ದಪಡಿಸಲು ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಸಿಲ್ಕ್ ಬೋರ್ಡ್ ಜಂಕ್ಷನ್ ನಿಂದ ಕೆ.ಆರ್ ಪುರಂವರೆಗಿನ ರಸ್ತೆಯನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದ್ದು, ಈ ಸಂಬಂಧ ಜಿಬಿಎ, ಬಿ–ಸ್ಮೈಲ್, ಮೆಟ್ರೋ, ಪೂರ್ವ ಹಾಗೂ ದಕ್ಷಿಣ ಪಾಲಿಕೆಗಳ ಅಧಿಕಾರಿಗಳೊಡನೆ ಇಂದು ಜಂಟಿಯಾಗಿ ತಪಾಸಣೆ ವೇಳೆ ಅವರು ಮಾತನಾಡಿದರು.

ಇಬ್ಲೂರು ಜಂಕ್ಷನ್ ಬಳಿ ಹೆಚ್ಚುವರಿ ಮೇಲ್ಸೇತುವೆ ನಿರ್ಮಾಣ ಮಾಡಿದಲ್ಲಿ ಸಂಚಾರ ದಟ್ಟಣೆ ಕಡಿಮೆಯಾಗಲಿದೆ ಎಂದು ಹೇಳಿದ್ದಾರೆ.

ಇಬ್ಲೂರು ಮೆಟ್ರೋ ನಿಲ್ದಾಣದ ಬಳಿ ಸುಮಾರು 2 ಕಿಲೋಮೀಟರ್ ಉದ್ದದ ಪಾದಚಾರಿ ಮಾರ್ಗದಲ್ಲಿ ಕೆಲವೆಡೆ ನಿರ್ವಹಣೆ ಇಲ್ಲದಿರುವುದು ಹಾಗೂ ಇನ್ನೂ ಕೆಲವೆಡೆ ಅಪೂರ್ಣವಾಗಿರುವುದನ್ನು ಗಮನಿಸಿ, ಪಾದಚಾರಿ ಮಾರ್ಗವನ್ನು ಅಭಿವೃದ್ಧಿಪಡಿಸುವಂತೆ ಸೂಚಿಸಿದ್ದಾರೆ.

***************

14ನೇ ಒಣಮೆಣಸಿನಕಾಯಿ ಮೇಳವನ್ನು ಇದೇ 6 ರಿಂದ 8 ರವರೆಗೆ ಹುಬ್ಬಳ್ಳಿಯ ಮೂರು ಸಾವಿರ ಮಠದ ಹೈಸ್ಕೂಲ್ ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಸಂಬಾರು ಪದಾರ್ಥಗಳ ಅಭಿವೃದ್ಧಿ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕ ಬಿ.ಆರ್.ಗಿರೀಶ ತಿಳಿಸಿದ್ದಾರೆ.

ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಅಂದಾಜು 79 ಸಾವಿರದ 152 ಹೆಕ್ಟೇರ್ ಪ್ರದೇಶದಲ್ಲಿ ಒಣಮೆಣಸಿನಕಾಯಿ ಬೆಳೆಯಲಾಗುತ್ತಿದ್ದು, ಅಂದಾಜು ಉತ್ಪಾದನೆ 1.58 ಲಕ್ಷ ಮೆಟ್ರಿಕ್ ಟನ್ ಗಳಷ್ಟು ನಿರೀಕ್ಷೆ ಮಾಡಲಾಗಿದೆ ಎಂದು ಹೇಳಿದ್ದಾರೆ.

ಹಲವಾರು ದೇಶಗಳಲ್ಲಿ ಈ ತಳಿಗಳಿಗೆ ಬೇಡಿಕೆಯಿದೆ. ಬೆಳೆಗಾರರು ಮತ್ತು ಗ್ರಾಹಕರ ನೇರ ಸಂಪರ್ಕ, ಬೆಳೆಗಾರರು, ಗ್ರಾಹಕರು ಮತ್ತು ವಿಜ್ಞಾನಿಗಳನ್ನು ಒಂದೇ ವೇದಿಕೆಗೆ ತರುವುದು, ಒಣಮೆಣಸಿನಕಾಯಿ ಬೇಸಾಯದಲ್ಲಿನ ಹೊಸ ಸಂಶೋಧನೆಗಳ ಮಾಹಿತಿಯನ್ನು ಬೆಳೆಗಾರರಿಗೆ ಒದಗಿಸುವ ಉದ್ದೇಶವನ್ನು ಒಣಮೆಣಸಿನಕಾಯಿ ಮೇಳ ಹೊಂದಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

**************

ಕಳೆದ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ **'ಮೂರನೇ ವಿಶ್ವ ಕನ್ನಡ ಸಮ್ಮೇಳನ'** ವನ್ನು ದಾವಣಗೆರೆಯಲ್ಲಿ ಆಯೋಜಿಸುವಂತೆ ಕೋರಿ ಸರ್ಕಾರಕ್ಕೆ ಶೀಘ್ರದಲ್ಲೇ ಪ್ರಸ್ತಾವನೆ ಸಲ್ಲಿಸಲು ತೀರ್ಮಾನಿಸಲಾಗಿದೆ ಎಂದು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮಲೆ ತಿಳಿಸಿದ್ದಾರೆ.

ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ವರ್ಷ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ, ಕೆಲವು ತಾಂತ್ರಿಕ ಮತ್ತು ಆಂತರಿಕ ಕಾರಣಗಳಿಂದಾಗಿ ನಡೆಯುವ ಸಾಧ್ಯತೆಗಳು ಕ್ಷೀಣಿಸಿವೆ. ಈ ಹಿನ್ನೆಲೆಯಲ್ಲಿ, ಕನ್ನಡದ ಕಂಪನ್ನು ಜಾಗತಿಕ ಮಟ್ಟಕ್ಕೆ ಪಸರಿಸಲು ವಿಶ್ವ ಕನ್ನಡ ಸಮ್ಮೇಳನವನ್ನು ದಾವಣಗೆರೆಯಲ್ಲಿ ನಡೆಸುವುದೇ ಸೂಕ್ತ ಎಂಬ ಅಭಿಪ್ರಾಯ ವ್ಯಕ್ತವಾಗಿದೆ ಎಂದು ಹೇಳಿದ್ದಾರೆ.

**ಧ್ವನಿ: ಡಾ.ಪುರುಷೋತ್ತಮ ಬಿಳಿಮಲೆ ( 26 ಸೆಕೆಂಡ್ಸ್)**

***************

ಭಾರತದ ಗ್ರೀನ್ ಎನರ್ಜಿ ಸ್ವಾವಲಂಬನೆ ಮತ್ತು ಬಂದರು ಆಧಾರಿತ ಅಭಿವೃದ್ಧಿ ಕಾರ್ಯತಂತ್ರವನ್ನು ದೃಷ್ಟಿಯಲ್ಲಿಟ್ಟುಕೊಂಡು ಮಂಗಳೂರು ಕಡಲ ತೀರದಲ್ಲಿ 'ಕಡಲ ಪವನ ಶಕ್ತಿ' ಉತ್ಪಾದನೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

ಮಂಗಳೂರು ಸಮುದ್ರ ತೀರದಲ್ಲಿ ಪವನ ಶಕ್ತಿ ಉತ್ಪಾದನೆಗೆ ಹೆಚ್ಚಿನ ಅವಕಾಶವಿದೆ. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಷಿಯಾನೋಗ್ರಫಿ ವರದಿಯನ್ನು ಉಲ್ಲೇಖಿಸಿ, ಭಾರತದ ಭರವಸೆಯ ಕಡಲ ಪವನ ಇಂಧನ 'ವಲಯ-2ರಲ್ಲಿ ಮಂಗಳೂರು ಕರಾವಳಿ' ಗುರುತಿಸಿಕೊಂಡಿದ್ದು, ಮಂಗಳೂರು ಕರಾವಳಿಯ ಸುಮಾರು 6 ಸಾವಿರದ 490 ಚದರ ಕಿಲೋಮೀಟರ್ ಪ್ರದೇಶವು ಪವನ ಇಂಧನ ಉತ್ಪಾದನೆಗೆ ಹೆಚ್ಚು ಪೂರಕವಾಗಿದೆ ಎಂದು ತಿಳಿಸಿದ್ದಾರೆ.

ಕರಾವಳಿಯಲ್ಲಿ ಭೂಕಂಪನ, ಚಂಡಮಾರುತ ಮುಂತಾದ ನೈಸರ್ಗಿಕ ವಿಕೋಪಗಳ ಅಪಾಯ ಕಡಿಮೆ ಇರುವುದರಿಂದ ದೀರ್ಘಕಾಲದ ಪವನ ಇಂಧನ ಯೋಜನೆಗಳ ಸ್ಥಾಪನೆಗೆ ಅತ್ಯಂತ ಸೂಕ್ತ ಹಾಗೂ ಸುರಕ್ಷಿತ ಪ್ರದೇಶವಾಗಿದೆ. ಹೀಗಾಗಿ, ಮಂಗಳೂರು ಕಡಲ ತೀರವನ್ನು ಪವನ ಶಕ್ತಿ ಉತ್ಪಾದನೆ ತಾಣವಾಗಿ ಅಭಿವೃದ್ಧಿಪಡಿಸಬೇಕು ಎಂದು ಮನವಿಯಲ್ಲಿ ತಿಳಿಸಿದ್ದಾರೆ.

***************

ಗದಗ ಜಿಲ್ಲಾ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ಆಶ್ರಯದಲ್ಲಿ ಎಂ.ಎಸ್.ಎಂ.ಇ. ಕುರಿತು ಜಾಗೃತಿ ಮೂಡಿಸುವ ಕಾರ್ಯಾಗಾರ ಬೇಟಗೇರಿಯಲ್ಲಿಂದು ನಡೆಯಿತು.

ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಪ್ರಶಾಂತ ಬಾರಿಗಿಡದ ಕಾರ್ಯಾಗಾರಕ್ಕೆ ಚಾಲನೆ ನೀಡಿ ಕೇಂದ್ರ ಸರ್ಕಾರದಿಂದ ಸಣ್ಣ, ಅತಿ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಿಗೆ ನೀಡುವ ಸಹಾಯ ಮತ್ತು ಸೌಲಭ್ಯಗಳ ಕುರಿತು ಉದ್ದಿಮೆದಾರರಿಗೆ ಮಾಹಿತಿ ನೀಡಿದರು.

***************

ಕರ್ನಾಟಕ ಜಾನಪದ ಪರಿಷತ್ತು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ವಿದ್ಯಾರ್ಥಿ ಜಾನಪದ ಲೋಕೋತ್ಸವ-2026 ಇದೇ 7 ಮತ್ತು 8ರಂದು ರಾಮನಗರ ಜಾನಪದ ಲೋಕದಲ್ಲಿ ನಡೆಯಲಿದೆ.

ಆದಿಚುಂಚನಗಿರಿ ಶಾಖಾ ಮಠಾಧೀಶರಾದ ಅನ್ನದಾನೇಶ್ವರನಾಥ ಸ್ವಾಮೀಜಿ ಅವರ ದಿವ್ಯ ಸಾನಿಧ್ಯದಲ್ಲಿ ರಂಗಭೂಮಿಯ ಪ್ರಖ್ಯಾತ ನಿರ್ದೇಶಕರಾದ ಡಾ.ಟಿ.ಎಸ್. ನಾಗಾಭರಣ ಲೋಕೋತ್ಸವ ಉದ್ಘಾಟಿಸಲಿದ್ದಾರೆ.

*******ಮುಕ್ತಾಯ********